ಸಿಸಿ.**685/2014** ಪಿ ಡಬ್ಲ್ಯೂ-**14**

**ದಿನಾಂಕಃ 03-02-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

ಮುಂದುವರಿದ **ಮುಖ್ಯ ವಿಚಾರಣೆ ಃ** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

1 ಮತ್ತು 2 ನೇ ಆರೋಪಿತರು ಈ ದಿನ ನ್ಯಾಯಾಲಯದಲ್ಲಿ ಗೈರು ಹಾಜರಾಗಿದ್ದು, ಆರೋಪಿತರ ಪರ ವಕೀಲರು ಆರೋಪಿತರ ಗುರುತಿಸುವಿಕೆ ಬಗ್ಗೆ ತಕರಾರು ಇಲ್ಲ ಎಂದು ತಿಳಿಸಿರುತ್ತಾರೆ.

ಸದರಿ ಅಸಸ್ ಮೆಂಟ್ ರಿಜಿಸ್ಟರ್ ಮತ್ತು ಸಭಾ ನಡಾವಳಿ ಪುಸ್ತಕವನ್ನು ಮಹಜರ್ ಮೂಲಕ ಪಡೆದುಕೊಂಡಿರುತ್ತಾರೆ. ಸದರಿ ಅಸಸ್ ಮೆಂಟ್ ರಿಜಿಸ್ಟರ್ ಅರಸೀಕೆರೆ ಗ್ರಾಮಕ್ಕೆ ಸಂಬಂಧಪಟ್ಟಿರುತ್ತದೆ. ಸದರಿ ಅಸಸ್ ಮೆಂಟ್ ರಿಜಿಸ್ಟರ್ ನಲ್ಲಿ ಪುಟ ಸಂಖ್ಯೆ **295** ರಿಂದ **488,** ಸಭಾ ನಡಾವಳಿ ಪುಸ್ತಕ ದಿಃ**22-11-2010** ರಿಂದ **04-09-2013** ರವರೆಗೆ ಇದ್ದು, ಇದರ ಪುಟ ಸಂಖ್ಯೆ **1** ರಿಂದ **98** ರವರೆಗೆ ಪುಟಗಳಿರುತ್ತವೆ. ಇನ್ನೊಂದು ಸಭಾ ನಡವಳಿ ಪುಸ್ತಕ ದಿನಾಂಕಃ **04-10-2013** ರಿಂದ **24-02-2014** ರವರೆಗೆ ಪುಟ ಸಂಖ್ಯೆ **1** ರಿಂದ **36** ಇರುತ್ತವೆ.

ಸಾಕ್ಷಿಯು ತಮ್ಮ ಕಛೇರಿಯಿಂದ ಅಸಸ್ ಮೆಂಟ್ ರಿಜಿಸ್ಟರ್ ಪುಸ್ತಕವನ್ನು ಹಾಜರುಪಡಿಸಿದ್ದು, ಅದನ್ನು ಗುರುತಿಸಿದ್ದು, ಸದರಿ ದಾಖಲಾತಿಯ ದೃಢೀಕೃತ ನಕಲನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು, ಅದನ್ನು ಗುರುತಿಸುವಲ್ಲಿ ಆರೋಪಿತರ ಪರ ವಕೀಲರ ಯಾವುದೇ ತಕರಾರು ಇಲ್ಲದ ಕಾರಣ ಸದರಿ ದಾಖಲಾತಿಯನ್ನು ನಿಪಿ-**10** ಎಂದು ಗುರುತಿಸಲಾಯಿತು ಮತ್ತು ಎರಡು ಸಭಾ ನಡಾವಳಿ ಪುಸ್ತಕಗಳ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ-**11** ಮತ್ತು ನಿಪಿ-**12** ಎಂದು ಗುರುತಿಸಲಾಯಿತು.

**ಪಾಟೀ ಸವಾಲು ಃ ಆರೋಪಿ ಪರ ವಕೀಲರಿಂದ.**

ಪಾಟೀ ಸವಾಲಿಗಾಗಿ ಸಮಯ ನೀಡಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ. ಕೇ. ಸ. ಇ. ಎ. ಒ.

Sd/-

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**

**ಕರ್ನಾಟಕ ಸರ್ಕಾರ**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.**

ಪಿ.ಡಬ್ಲ್ಯೂಃ 1

ಸಿ.ಡಬ್ಲ್ಯೂಃ 1

ಸಾಕ್ಷಿದಾರರ ಹೆಸರು ಃ

ತಂದೆಯ ಹೆಸರು ಃ

ವಯಸ್ಸು ಃ **ವರ್ಷ**

ಉದ್ಯೋಗ ಃ ವ್ಯವಸಾಯ

ವಾಸಸ್ಥಳ ಃ

**ದಿನಾಂಕಃ 15-01-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ ಃ** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

5 ನೇ ಆರೋಪಿಯು ಈ ದಿನ ನ್ಯಾಯಾಲಯದಲ್ಲಿ ಗೈರು ಹಾಜರಾಗಿದ್ದು, ಆರೋಪಿ ಪರ ವಕೀಲರು ಆರೋಪಿಯ ಗುರುತಿಸುವಿಕೆ ಬಗ್ಗೆ ತಕರಾರು ಇಲ್ಲ ಎಂದು ತಿಳಿಸಿರುತ್ತಾರೆ.

ಚಾಸಾ-1 ನನಗೆ ಗೊತ್ತು. ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿಗಳು ನನಗೆ ಗೊತ್ತು. ನಾನು ಈ ಪ್ರಕರಣದ ಘಟನೆಯನ್ನು ಕಣ್ಣಾರೆ ಕಂಡಿರುವುದಿಲ್ಲ, ನನಗೆ ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ಪೊಲೀಸರ ಮುಂದೆ ಹೇಳಿಕೆ ನೀಡಿರುವುದಿಲ್ಲ. ನನಗೆ ಈ ಪ್ರಕರಣದ ಸಂಬಂಧ ಬೇರೇನೂ ಗೊತ್ತಿರುವುದಿಲ್ಲ.

ಈಗ್ಗೆ ಸುಮಾರು ಎರಡು ವರ್ಷಗಳ ಹಿಂದೆ ನಾನು ನಂದಿಹೊಸಳ್ಳಿ ಗ್ರಾಮದಲ್ಲಿ ಸಂಜೆ 4-00 ಗಂಟೆ ಸಮಯದಲ್ಲಿ ರಸ್ತೆಯಲ್ಲಿ ಬರುತ್ತಿರುವಾಗ ಪೊಲೀಸರ ಕೋರಿಕೆಯ ಮೇರೆಗೆ ಒಂದು ದಾಖಲಾತಿಗೆ ಸಹಿ ಮಾಡಿದ್ದು, ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮದಲ್ಲಿ ಪೊಲೀಸರು ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ದೂರಾಗಿದ್ದು, ಸದರಿ ದಾಖಲೆಯನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಮತ್ತೊಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಪಂಚನಾಮೆಯಾಗಿದ್ದು, ಸದರಿ ದಾಖಲೆಯನ್ನು ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕಃ **21-03-2020** ರಂದು ರಾತ್ರಿ **7-00** ಗಂಟೆ ಸಮಯದಲ್ಲಿ ಕರಕುಚ್ಚಿ ತಾಂಡ್ಯದ **2** ನೇ ಆರೋಪಿಯ ಅಂಗಡಿಯ ಮುಂದೆ ಪೊಲೀಸರು ಮಹಜರ್ ಕ್ರಮವನ್ನು ಜರುಗಿಸಿದ್ದು, ಅದಕ್ಕೆ ನನ್ನ ಸಹಿ ಹಾಕಿರುತ್ತೇನೆಂದರೆ ಸರಿ. **1** ನೇ ಆರೋಪಿಯು ಅಕ್ರಮವಾಗಿ ಮದ್ಯವನ್ನು ಮಾರಾಟ ಮಾಡುತ್ತಿದ್ದು, ಸದರಿ ಮದ್ಯವನ್ನು ಅವರಿಂದ ಅಮಾನತ್ತುಪಡಿಸಿಕೊಂಡ ಬಗ್ಗೆ ನಾನು ನಿಪಿ-2 ಕ್ಕೆ ಸಹಿ ಹಾಕಿರುತ್ತೇನೆಂದರೆ ಸರಿಯಲ್ಲ. ಪೊಲೀಸರು ನನ್ನ ಸಮಕ್ಷಮ ಆರೋಪಿಯ ಕಡೆಯಿಂದ **330** ಎಂ ಎಲ್ ನ ಯು ಬಿ ಎಕ್ಸ್‌ಪೋರ್ಟ ಪ್ರಿಮಿಯಮ್ ನ **10** ಬೀಯರ್ ಬಾಟಲುಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ಅದೇ ರೀತಿ **90** ಎಂ ಎಲ್ ನ ಕ್ಯಾಪ್ಟನ್ ಮಾರ್ಟಿನ್ ಸ್ಪೆಷಲ್ ವಿಸ್ಕಿಯ **37** ಪೌಚುಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ಪೊಲೀಸರು ನನ್ನ ಸಮಕ್ಷಮ ಆರೋಪಿಯಿಂದ ಮದ್ಯದ ಪೌಚುಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ.

ಆರೋಪಿತರು ನನಗೆ ಪರಿಚಯವಿರುವ ಕಾರಣ, ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ನಿಪಿ-2 ರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ನನಗೆ ಗೊತ್ತಿದ್ದರೂ ಸಹ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ನಾನು ಈ ಪ್ರಕರಣದ ಘಟನೆಯನ್ನು ಕಣ್ಣಾರೆ ಕಂಡಿದ್ದೇನೆಂದರೆ ಸರಿಯಲ್ಲ. ನಾನು ಈಗ ಓದಿ ಹೇಳಿದಂತೆ ನಾನು ಮೇಲ್ಕಂಡ ವಿಳಾಸದಲ್ಲಿ - - - -ಪುನಃ ನೋಡಿದರೆ ಗುರುತಿಸುತ್ತೇನೆ ಎಂದು ಹೇಳಿದ್ದೇನೆಂದರೆ ಸರಿಯಲ್ಲ. ಸಾಕ್ಷಿಯ ಅಲ್ಲಗೆಳೆದ ಹೇಳಿಕೆಯ ಭಾಗವನ್ನು ನಿಪಿ-7 ಎಂದು ಗುರುತಿಸಲಾಯಿತು. ನಾನು ಈ ಪ್ರಕರಣದ ಘಟನೆಯನ್ನು ಕಣ್ಣಾರೆ ಕಂಡಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**<u>ಪಾಟೀ ಸವಾಲು ಃ ಆರೋಪಿ ಪರ ವಕೀಲರಿಂದ.</u>**

ಪಾಟೀ ಸವಾಲು ಇಲ್ಲ

**<u>ಮರುವಿಚಾರಣೆಃ</u>** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**